ಕರ್ನಾಟಕ ವಿಧಾನಸಭೆ

(15ನೇ ವಿಧಾನಸಭೆ)

ಹನ್ನೆರಡನೇ ಅಧಿವೇಶನ

ಕಾರ್ಯಕಲಾಪಗಳ ಪಟ್ಟಿ

ಗುರುವಾರ, ದಿನಾಂಕ 10ನೇ ಮಾರ್ಚ್, 2022

(ಸಮಯ: ಬೆಳಿಗ್ಗೆ 11.00 ಗಂಟೆಗೆ)

----

1. ಪ್ರಶ್ನೋತ್ತರ

ಅ) ಸದನದಲ್ಲಿ ಉತ್ತರಿಸುವ ಪ್ರಶ್ನೆಗಳು : ಹದಿಮೂರನೇ ಪಟ್ಟಿ

ಆ) ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು : ಹದಿಮೂರನೇ ಪಟ್ಟಿ

2. ವಿತ್ತೀಯ ಕಾರ್ಯಕಲಾಪ

2022–23ನೇ ಸಾಲಿನ ಆಯವ್ಯಯ ಅಂದಾಜುಗಳ ಮೇಲೆ ಸಾಮಾನ್ಯ ಚರ್ಚೆ.

3. ಗಮನ ಸೆಳೆಯುವ ಸೂಚನೆಗಳು

1) **ಶ್ರೀ ಅಭಯ ಪಾಟೀಲ ಅವರು** – ಬೆಳಗಾವಿ (ಉತ್ತರ) ನೋಂದಣಿ ಕಚೇರಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿ/ಸಿಬ್ಬಂದಿಗಳು ಸತ್ತವರ ಹಾಗೂ ಬೇರೆಯವರ ಹೆಸರುಗಳಲ್ಲಿ ಜಾಗ/ಜಮೀನುಗಳನ್ನು ನೋಂದಣಿ ಮಾಡಿ ಸರ್ಕಾರಕ್ಕೆ ಕೋಟ್ಯಾಂತರ ರೂಪಾಯಿಗಳನ್ನು ನಷ್ಟ ಮಾಡಿರುವುದರಿಂದ, ಅವರುಗಳ ವಿರುದ್ಧ ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಕಂದಾಯ ಸಚಿವರ ಗಮನ ಸೆಳೆಯುವುದು.

2) **ಡಾ. ಕೆ. ಅನ್ನದಾನಿ ಅವರು** – ಮಳವಳ್ಳಿ ತಾಲ್ಲೂಕು ಬಿ.ಜಿ.ಪುರ ಹೋಬಳಿಯಲ್ಲಿ ಪ್ರಗತಿಯಲ್ಲಿರುವ ಪೂರಿಗಾಲಿ ಏತ ನೀರಾವರಿ ಯೋಜನೆಯ ಕಾಮಗಾರಿಯನ್ನು ಭೂ ಒತ್ತುವರಿ ಮಾಡಿ ತ್ವರಿತಗತಿಯಲ್ಲಿ ನಿರ್ವಹಿಸುವ ಬಗ್ಗೆ ಮಾನ್ಯ ಜಲಸಂಪನ್ಮೂಲ ಸಚಿವರ ಗಮನ ಸೆಳೆಯುವುದು.

3) **ಶ್ರೀ ಸಿದ್ದು ಸವದಿ ಅವರು** – ರಾಜ್ಯದಲ್ಲಿರುವ ಮಾಳಿ ಸಮಾಜದ ಅಭಿವೃದ್ಧಿಗಾಗಿ ಒಂದು ನಿಗಮವನ್ನು ಸ್ಥಾಪಿಸಲು ಕ್ರಮ ಕೈಗೊಳ್ಳುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

4) **ಶ್ರೀ ವೆಂಕಟರಾವ್ ನಾಡಗೌಡ ಅವರು** – ಸಿಂಧನೂರು ವಿಧಾನಸಭಾ ಕ್ಷೇತ್ರದಲ್ಲಿ ಬಂಗಾಳ ನಿರಾಶ್ರಿತರ ಕ್ಯಾಂಪುಗಳಲ್ಲಿ ವಾಸವಾಗಿರುವ ಪಶ್ಚಿಮ ಬಂಗಾಳ ಮೂಲದ ನಮಸೂದ್ರ ಜಾತಿಗೆ ಸೇರಿದವರನ್ನು ರಾಜ್ಯದಲ್ಲಿ ಪರಿಶಿಷ್ಟ ಜಾತಿಗೆ ಸೇರಿಸುವ ಬಗ್ಗೆ ಮಾನ್ಯ ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಗಮನ ಸೆಳೆಯುವುದು.

5) **ಶ್ರೀ ಸಂಜೀವ ಮಠಂದೂರು ಅವರು** – ರಾಜ್ಯದ ಅನುದಾನಿತ ಕನ್ನಡ ಮಾಧ್ಯಮ ಶಾಲೆಗಳಲ್ಲಿ ಶೈಕ್ಷಣಿಕ ಚಟುವಟಿಕೆಗಳನ್ನು ಮುಂದುವರೆಸುವ ದೃಷ್ಟಿಯಿಂದ ಖಾಲಿ ಇರುವ ಹುದ್ದೆಗಳಿಗೆ ಅತಿಥಿ ಅಧ್ಯಾಪಕರು/ಉಪನ್ಯಾಸಕರನ್ನು ನೇಮಕ ಮಾಡುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.

6) **ಶ್ರೀ ಶ್ರೀಮಂತ ಬಾಳಸಾಹೇಬ ಪಾಟೀಲ ಅವರು** – ರಾಜ್ಯಾದ್ಯಂತ ಹತ್ತು ಹೆಚ್.ಪಿ. ವಿದ್ಯುತ್ ಸಂಪರ್ಕ ಹೊಂದಿರುವ ರೈತರಿಗೆ ಉಚಿತವಾಗಿ ವಿದ್ಯುತ್ ಸರಬರಾಜು ಮಾಡುತ್ತಿರುವ ಮಾದರಿಯಲ್ಲಿಯೇ ಸಾಮೂಹಿಕ ಏತ ನೀರಾವರಿ ಹೊಂದಿರುವ ರೈತರಿಗೂ ಹೈಟೆನ್ಷನ್ ಲೈನ್‌ಗಳ ಮೂಲಕ ವಿದ್ಯುತ್ ಸರಬರಾಜು ಮಾಡುವ ಬಗ್ಗೆ ಮಾನ್ಯ ಇಂಧನ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರ ಗಮನ ಸೆಳೆಯುವುದು.

7) **ಶ್ರೀ ಕೆ.ವೈ. ನಂಜೇಗೌಡ ಅವರು** – ಕೋಲಾರ ಜಿಲ್ಲೆ ಮಾಲೂರು ಪುರಸಭೆ ವ್ಯಾಪ್ತಿಯಲ್ಲಿ ಕೆ.ಯು.ಡಬ್ಲ್ಯೂ.ಎಸ್.ಡಿ.ಬಿ. ಇಲಾಖೆಯಿಂದ ಕೈಗೊಂಡಿರುವ ಒಳಚರಂಡಿ ಕಾಮಗಾರಿಗಳನ್ನು ಪೂರ್ಣಗೊಳಿಸಿ ಪುರಸಭೆಗೆ ಹಸ್ತಾಂತರಿಸಲಾಗಿದೆ ಎಂದು ಅಧಿಕಾರಿಗಳು ನೀಡಿರುವ ತಪ್ಪು ಮಾಹಿತಿಯನ್ನು ಉನ್ನತ ಮಟ್ಟದ ತನಿಖೆಗೆ ಒಳಪಡಿಸುವ ಬಗ್ಗೆ ಮಾನ್ಯ ನಗರಾಭಿವೃದ್ಧಿ ಸಚಿವರ ಗಮನ ಸೆಳೆಯುವುದು.

8) **ಶ್ರೀ ಈಶ್ವರ್ ಭೀಮಣ್ಣ ಖಂಡ್ರೆ ಅವರು** – ಬೀದರ್ ಜಿಲ್ಲೆಯ ಭಾಲ್ಕಿ ಪಟ್ಟಣದಲ್ಲಿ ಸರ್ಕಾರಿ ಪ್ರೌಢಶಾಲೆಗೆ ಸೇರಿದ ಜಮೀನನ್ನು ಸಾರ್ವಜನಿಕ ಆಸ್ಪತ್ರೆ ಕಟ್ಟಡ ನಿರ್ಮಾಣಕ್ಕಾಗಿ ಹಸ್ತಾಂತರಿಸುವ ಬಗ್ಗೆ ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರ ಗಮನ ಸೆಳೆಯುವುದು.

ಎಂ.ಕೆ.ವಿಶಾಲಾಕ್ಷಿ
ಕಾರ್ಯದರ್ಶಿ(ಪ್ರ)

ವಿಧಾನಸಭೆಯ ಕಾರ್ಯಕಲಾಪಗಳ ಪಟ್ಟಿಯನ್ನು ಅಂತರ್ಜಾಲದ ಈ ವಿಳಾಸದಲ್ಲಿ ಪಡೆದುಕೊಳ್ಳಬಹುದು
http://kla.kar.nic.in/assembly/lob/lob.htm